# ಕರ್ನಾಟಕ ವಿಧಾನ ಪರಿಷತ್ತು

1.ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 182
2.ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
3.ಉತ್ತರಿಸಬೇಕಾದ ದಿನಾಂಕ : 14.02.2023
4.ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿರುವ ಬಿ.ಎಸ್.ಎಸ್.ಕೆ. ಕಳೆದ 5-6 ವರ್ಷಗಳಿಂದ ಕಾರ್ಖಾನೆಯಲ್ಲಿ ದುಡಿಯುತ್ತಿದ್ದ ಕಾರ್ಮಿಕರಿಗೆ ಸಂಬಂಳವಿಲ್ಲದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ.<br>ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯಿಂದ ಕಾರ್ಮಿಕರಿಗೆ ಪಾವತಿಸಬೇಕಾದ ವೇತನ ಬಾಕಿಯ ವಿವರಗಳು ಈ ಕೆಳಕಂಡಂತೆ ಇರುತ್ತವೆ. |

| ಕ್ರ. ಸಂ | ವರ್ಷ | ಮೊತ್ತ | ಬಾಕಿ ಉಳಿಸಿ ಕೊಂಡಿರುವ ಅವಧಿ |
|---|---|---|---|
| 1. | 2016-17 | 1,60,61,054.68 | 1 ತಿಂಗಳು |
| 2. | 2017-18 | 3,40,82,891.19 | 9 ತಿಂಗಳು |
| 3. | 2018-19 | 0 | - |
| 4. | 2019-20 | 4,27,58,976.88 | 12 ತಿಂಗಳು |
| 5. | 2020-21 | 3,74,32,595.29 | 12 ತಿಂಗಳು |
| 6. | 2022-23 | 2,04,48,093.60 | 06 ತಿಂಗಳು |
| | **ಒಟ್ಟು** | **19,52,65,053.64** | |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಆ) | ಹಾಗಿದ್ದಲ್ಲಿ ಈ ಕಾರ್ಮಿಕರ ಭವಿಷ್ಯಕ್ಕಾಗಿ ಸರ್ಕಾರ ಯಾವ ಕ್ರಮಕೈಗೊಂಡಿದೆ, ಮತ್ತು ಅವರ ಬಾಕಿ ವೇತನ ನೀಡಲು ತೆಗೆದುಕೊಂಡಿರುವ ಕ್ರಮವೇನು: (ಸಂಪೂರ್ಣ ಮಾಹಿತಿ ಒದಗಿಸುವುದು). | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ, ಹಳ್ಳಿಖೇಡ್, ಹುಮ್ನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಈ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಸಲುವಾಗಿ 2022-23ನೇ ಹಂಗಾಮಿನಿಂದ 40 ವರ್ಷಗಳ ಎಲ್.ಆರ್.ಓ.ಟಿ. ಆಧಾರದ ಮೇಲೆ 'ಇದ್ದಲ್ಲಿ ಇದ್ದಂತೆಯೇ' ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಆದೇಶ ಸಂಖ್ಯೆ ಸಿಐ 107 ಸಿಓಎಫ್ 2022 ದಿನಾಂಕ 10.01.2023ರಲ್ಲಿ ಅನುಮತಿಯನ್ನು ನೀಡಲಾಗಿರುತ್ತದೆ.<br><br>ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯ ಹಣಕಾಸು ಮತ್ತು ಆಡಳಿತ ವ್ಯವಹಾರಗಳ ನಿರ್ವಹಣೆಯು ಆಡಳಿತ ಮಂಡಳಿಗೆ ಸೇರಿರುತ್ತದೆ. ಬಾಕಿ ವೇತನ ಮತ್ತು ಭತ್ಯೆಗಳನ್ನು ಕಾರ್ಮಿಕರಿಗೆ ಪಾವತಿಸುವುದು ಆಡಳಿತ ಮಂಡಳಿಯ ಜವಾಬ್ದಾರಿಯಾಗಿರುತ್ತದೆ. |

......2

| | | |
|---|---|---|
| | | ಈ ಕಾರ್ಖಾನೆಯನ್ನು ಗುತ್ತಿಗೆ ಪಡೆಯುವ ಗುತ್ತಿಗೆದಾರರು ಪಾವತಿಸುವ ಭದ್ರತಾ ಠೇವಣಿ, ಮುಂಗಡ ಹಣ ಮತ್ತು ವಾರ್ಷಿಕ ಗುತ್ತಿಗೆ ಮೊತ್ತದಿಂದ ಕಾರ್ಖಾನೆಯ ಸಾಲ ಮತ್ತು ಜವಾಬ್ದಾರಿಗಳನ್ನು ಆದ್ಯತೆಯ ಮೇಲೆ ಪಾವತಿಸಬೇಕಾಗಿದ್ದು, ಈ ಪೈಕಿ ಕಾರ್ಖಾನೆಯ ಕಾರ್ಮಿಕರ ವೇತನ ಮತ್ತು ಭತ್ಯೆಗಳನ್ನು ಸಹ ಪಾವತಿಸಲು ನಿಯಮಾನುಸಾರ ಕ್ರಮವಹಿಸುವುದು ಆಡಳಿತ ಮಂಡಳಿಯ ಜವಾಬ್ದಾರಿಯಾಗಿರುತ್ತದೆ. |
| (ಇ) | ಕಾರ್ಖಾನೆಯನ್ನು ಮುಚ್ಚಲು ಕಾರಣಗಳ ಬಗ್ಗೆ ಸರ್ಕಾರ ತನಿಖೆ ಮಾಡಿದೆಯೇ; ಮಾಡದಿದ್ದಲ್ಲಿ ತನಿಖೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ? | ಸ್ಥಗಿತಗೊಂಡಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಖಾಸಗಿಯವರಿಗೆ ದೀರ್ಘಾವಧಿ ಮೇಲೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸುವುದು ಸರ್ಕಾರದ ಪ್ರಸ್ತುತ ನೀತಿಯಾಗಿರುತ್ತದೆ.<br><br>ಅದರಂತೆ ಕಾರ್ಖಾನೆಯನ್ನು ಎಲ್.ಆರ್.ಓ.ಟಿ. ಆಧಾರದ ಮೇಲೆ ಗುತ್ತಿಗೆ ನೀಡಲು ಈಗಾಗಲೇ ಅನುಮೋದನೆ ನೀಡಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಈ ಕಾರ್ಖಾನೆಯು ಸ್ಥಾಪನೆಗೊಂಡು ಸುಮಾರು 50 ವರ್ಷಗಳಿಗೂ ಮೇಲ್ಪಟ್ಟಿದ್ದು, ಕಾರ್ಖಾನೆಯು ಸ್ಥಗಿತಗೊಳ್ಳಲು ಹಲವಾರು ಕಾರಣಗಳಿರುತ್ತವೆ. ಈ ಕುರಿತು ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಸಿಐ 74 ಸಿಓಎಫ್ 2023

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು